**1 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ಮಳವಳ್ಳಿ**

**ಸಿ.ಸಿ ನಂ. 82/2017**

ಫ್ರಾಸಾ – 8 ಚಾಸಾ – 6

ಸಾಕ್ಷಿಯನ್ನು ದಿಃ 19.11.2025 ರಂದು ಕರೆಸಿ ಪ್ರಮಾಣ ಮಾಡಿಸಲಾಯಿತು

| | |
|---|---|
| ಸಾಕ್ಷಿದಾರರ ಹೆಸರು | ಸಿಂಗರಿಗೌಡ |
| ತಂದೆಯ / ಗಂಡನ ಹೆಸರು | ಸಿಂಗರಿಗೌಡ |
| ವಯಸ್ಸು | 78 |
| ಉದ್ಯೋಗ | ವ್ಯವಸಾಯ |
| ವಾಸ | ಚನ್ನಪಿಳ್ಳೆಕೊಪ್ಪಲು ಗ್ರಾಮ |

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ ರವರಿಂದ**

1. ಈಗ ಒಂದು ದಾಖಲಾತಿ ಸಾಕ್ಷಿಗೆ ತೋರಿಸಲಾಗಿ ಸಾಕ್ಷಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದು ಮಹಜರ್ ಆಗಿದ್ದು ಅದನ್ನು ನಿ.ಪಿ–2 ಎಂದು ಗುರುತಿಸಲಾಯಿತು. ನಿ.ಪಿ–2 ರಲ್ಲಿ ತನ್ನ ಸಹಿಯನ್ನು ನಿ.ಪಿ–2(ಸಿ) ಎಂದು ಗುರುತಿಸಲಾಯಿತು. ನಿ.ಪಿ–2 ಕ್ಕೆ ನಾನು ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನಿ.ಪಿ–2 ರ ಸಂಗತಿಗಳು ನನಗೆ ಗೊತ್ತಿಲ್ಲ. ನನ್ನ ಮುಂದು ಒಂದು ದೊಣ್ಣೆ ಮತ್ತು ಕಲ್ಲನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಶ್ರೀ ಸ ಸ ಅ ರವರು ಅನುಮತಿಯನ್ನು

ಕೋರುತ್ತಾರೆ. ಕಡತವನ್ನು ಪರೀಕ್ಷಿಸಲಾಗಿ ಸಾಕ್ಷಿಯು ಮಹಜರುದಾರನಾಗಿದ್ದು ತನ್ನ ಮಹಜರಿಗೆ ವಿರುದ್ದ ಸಾಕ್ಷ್ಯವನ್ನು ನುಡಿಯುತ್ತಿದ್ದಾರೆ ಆದರಿಂದ ಅವರನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿಯನ್ನು ನೀಡಲಾಯಿತು.)

**ಪಾಟೀ ಸವಾಲುಃ ಮಾನ್ಯ ಸ.ಸ.ಅ ರವರಿಂದ**

**2.** ದಿನಾಂಕ 12-10-2016 ರಂದು ಮದ್ಯಾಹ್ನ 12 ರಿಂದ 12.40 ಗಂಟೆಯವರೆಗೆ ಚಾಸಾ-1 ರವರು ಸ್ಥಳ ತೋರಿಸಿದ ಮೇರೆಗೆ ಪೊಲೀಸರು ನಮ್ಮ ಗ್ರಾಮಕ್ಕೆ ಬಂದು ನಮ್ಮಗಳ ಸಮಕ್ಷಮ ನಿ.ಪಿ-2 ರಂತೆ ಮಹಜರ್ ಕ್ರಮ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನಾನು ಮತ್ತು ಚಾಸ 7 ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. 3 ಅಡಿ ಉದ್ದದ ನೀಲಗಿರಿ ಮರದದೊಣ್ಣೆ ಎರಡು ಕಾಡುಕಲ್ಲು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಮಹಜರು ಸಂದರ್ಭದಲ್ಲಿ ಪೊಲೀಸರು ಕಚ್ಚಾ ನಕಾಶೆ ತಯಾರಿಸಿದರು ಎಂದರೆ ಸರಿಯಲ್ಲ. ನಾನು ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ**

(ನನ್ನ ಉಕ್ತಲೇಖನದ ಮೂಲಕ ಸಾಕ್ಷಿಯ ಹೇಳಿಕೆಯನ್ನು ಬಹಿರಂಗ ನ್ಯಾಯಾಲಯದಲ್ಲಿ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಇ.

1 ನೇ ಅಪರ ಸಿ.ಜೆ. ಮತ್ತು ಜೆ.ಎಂಎಫ್.ಸಿ
ಮಳವಳ್ಳಿ